ದಿನಾಂಕಃ **18-09-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**<u>ಪಾಟೀ ಸವಾಲುಃ ಪ್ರತಿವಾದಿ 1 ಮತ್ತು 7 ಪರ ಶ್ರೀ ಕೆ ಪಿ ಎಂ ವಕೀಲರಿಂದ,</u>**

1) ನನ್ನ ತಾತನ ಹೆಸರು ಗೌಡಬೋರೇಗೌಡ ಃಉಃ ದೇವಿಬೋರೇಗೌಡ. ವಾದಿ ಮತ್ತು ಪ್ರತಿವಾದಿಗಳ ಕುಟುಂಬದಲ್ಲಿ 1983 ನೇ ಸಾಲಿನಲ್ಲಿ ವಿಭಾಗ ಆಗಿರುತ್ತದೆ ಎಂದರೆ ಸರಿಯಲ್ಲ. ಸದರಿ ವಿಭಾಗ ಪತ್ರಕ್ಕೆ ನನ್ನ ತಾತ ಗೌಡಬೋರೇಗೌಡ ಸಹಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಗೌಡಬೋರೇಗೌಡ ಎಂಬುವವರು ನಮ್ಮ ಗ್ರಾಮದಲ್ಲಿ ಇತರರು ಇದ್ದಾರೆ ಎಂದು ತೋರಿಸಲು ದಾಖಲೆ ಹಾಜರುಪಡಿಸಿರುವುದಿಲ್ಲ. ವಾದಿ ಅವರ ತಂದೆ ವಿರುದ್ಧ ಅಸಲು ದಾವೆ 135/1982 ರಂತೆ ದಾವೆ ಸಲ್ಲಿಸಿದ್ದರು ಎಂದರೆ ಸರಿಯಲ್ಲ. ಗೌಡಬೋರೇಗೌಡ ರವರ ತಮ್ಮನ ಹೆಸರು ದೇವಿಚನ್ನಪ್ಪ ಎಂದರೆ ಸರಿ.

2) ಬೋರೇಗೌಡ ಃಉಃ ವಟ್ಟಣ್ಣ ಬೇರೆ ಬೇರೆ ಆಗಿರುತ್ತಾರೆ. ಬೋರೇಗೌಡ ಃಉಃ ವಟ್ಟಣ್ಣ ರವರಿಂದ ವಾದಿ ಮನೆಯನ್ನು ಖರೀದಿ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಮನೆಯನ್ನು ನಮಗೆ ಬಿಟ್ಟು ಕೊಡುವಂತೆ ಮಾತುಕತೆ ಆಗಿರುತ್ತದೆ ಎಂದರೆ ಸರಿಯಲ್ಲ. ನಾನು ವಾದಿಯರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಗೌರಮ್ಮ ರವರು ಖರೀದಿ ಮಾಡಿದ ಆಸ್ತಿಯನ್ನು ಈ ದಾವೆಯಲ್ಲಿ ಸೇರಿಸಿದ ಬಗ್ಗೆ ನನಗೆ ಗೊತ್ತಿಲ್ಲ. 2 ನೇ ಪ್ರತಿವಾದಿ ಗಂಡ ಮಾದೇಗೌಡ 1969 ನೇ ಸಾಲಿನಲ್ಲಿ ವಿಭಾಗ ಆಗಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 4 ನೇ ಪ್ರತಿವಾದಿ ಒಂದು ಆಸ್ತಿಯನ್ನು ಮಾರಾಟ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. 4 ನೇ ಪ್ರತಿವಾದಿ ಗಂಡ ಚೇರ್ನಹಳ್ಳಿ ಗ್ರಾಮ ಬಿಟ್ಟು ಕೆ ಆರ್ ನಗರದ ಚೌಕಹಳ್ಳಿ ಗ್ರಾಮದಲ್ಲಿ ವಾಸವಾಗಿರುತ್ತಾರೆ ಎಂದರೆ ಸಾಕ್ಷಿ ಎರಡೂ ಕಡೆ ವಾಸವಾಗಿರುತ್ತಾರೆ ಎಂದು ನುಡಿಯುತ್ತಾರೆ. ನಾನು 1 ನೇ ಪ್ರತಿವಾದಿ ಹೆಸರಿನಲ್ಲಿರುವ ಕ್ರಯ ಪತ್ರಕ್ಕೆ ಸಾಕ್ಷಿದಾರನಾಗಿ ಸಹಿ ಹಾಕಿರುವುದಿಲ್ಲ.

**ಪಾಟೀ ಸವಾಲುಃ** ಪ್ರತಿವಾದಿ 5 ರವರ ಪರ ವಕೀಲರಿಂದ,

1) ವಾದಿಗಳು ಮತ್ತು ನಾನು ಒಂದೇ ಗ್ರಾಮದವರು. ವಾದಿ ಗಂಡ ರಾಮೇಗೌಡ ಬದುಕಿದ್ದಾಗ ನಾನು ಅಪ್ರಾಪ್ತ ವಯಸ್ಕನಾಗಿದ್ದೆ. ದಾವಾ ಆಸ್ತಿಗಳು ಪಿತ್ರಾರ್ಜಿತ ಆಸ್ತಿಗಳು ಎಂದು ನನಗೆ ನನ್ನ ಹಿರಿಯರು ತಿಳಿಸಿರುತ್ತಾರೆ. ದಾವಾ ಆಸ್ತಿಗಳು ಪಿತ್ರಾರ್ಜಿತ ಆಸ್ತಿಗಳಾಗಿರುತ್ತವೆ. ದಾವಾ ಆಸ್ತಿಗಳು 1 ನೇ ಪ್ರತಿವಾದಿಯ ಸ್ವಯಾರ್ಜಿತ ಆಸ್ತಿಗಳು ಎಂದರೆ ಸರಿಯಲ್ಲ. ರಾಮೇಗೌಡರವರ ಮೊದಲ ಪತ್ನಿ ಪುಟ್ಟಮ್ಮ ರವರಿಗೆ ದಿಃ 05-11-1983 ರಲ್ಲಿ ಭಾಗ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ. 2 ನೇ ಹೆಂಡತಿ ಮಕ್ಕಳ ನಡುವೆ ಮಾತ್ರ ವಿಭಾಗ ಆಗಬೇಕಾಗಿರುತ್ತದೆ ಎಂದರೆ ಸರಿಯಲ್ಲ. ನಾನು ವಾದಿ ಪರವಾಗಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು.)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ